ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹನ್ನೊಂದನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 16ನೇ ಡಿಸೆಂಬರ್, 2021
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಸಂತಾಪ ಸೂಚನೆ

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

3. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

1. **ಡಾ. ಅಶ್ವಥ್ ನಾರಾಯಣ ಸಿ.ಎನ್. (ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು) ಅವರು:-**

   ಅ) 2021ನೇ ಸಾಲಿನ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. **ಡಾ. ಕೆ. ಸುಧಾಕರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು) ಅವರು:-**

   ಅ) 2021ನೇ ಸಾಲಿನ ಕರ್ನಾಟಕ ರಾಜ್ಯ ಆಯುಷ್ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. **ಶ್ರೀ ಬಿ.ಸಿ. ನಾಗೇಶ್ (ಮಾನ್ಯ ಪ್ರಾಥಮಿಕ, ಪ್ರೌಢಶಿಕ್ಷಣ ಮತ್ತು ಸಕಾಲ ಸಚಿವರು) ಅವರು:-**

   ಅ) 2021ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

... 2/ ..

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ** ಸಿದ್ದರಾಮಯ್ಯ, **ವಿ. ಮುನಿಯಪ್ಪ, ಪಿ.ಟಿ. ಪರಮೇಶ್ವರ್ ನಾಯಕ್, ಟಿ. ರಘುಮೂರ್ತಿ, ಗಣೇಶ್ ಪ್ರಕಾಶ್ ಹುಕ್ಕೇರಿ ಹಾಗೂ ಇತರರು** – ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರವಾಹ ಮತ್ತು ಅತಿವೃಷ್ಟಿಯಿಂದ ರೈತರ ಬೆಳೆ, ರಸ್ತೆ, ಸೇತುವೆ, ಸರ್ಕಾರಿ ಕಟ್ಟಡಗಳು, ಸಾರ್ವಜನಿಕ ಮನೆಗಳು ಹಾನಿಯಾಗಿದ್ದು, ಜನ ಜಾನುವಾರುಗಳ ಪ್ರಾಣ ಹಾನಿಯಾಗಿರುವುದರಿಂದ ರೈತರು ಹಾಗೂ ರಾಜ್ಯದ ಜನತೆ ಸಂಕಷ್ಟದಲ್ಲಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ** ಕೆ.ಎಂ. **ಶಿವಲಿಂಗೇಗೌಡ, ಬೆಳ್ಳಿ ಪ್ರಕಾಶ್, ಆರ್. ಮಂಜುನಾಥ್, ಶ್ರೀಮತಿ ಕೆ. ಪೂರ್ಣಿಮ ಹಾಗೂ ಇತರರು** – ಕರ್ನಾಟಕ ರಾಜ್ಯದಲ್ಲಿ ಗೊಲ್ಲ ಸಮುದಾಯದ ಕಾಡುಗೊಲ್ಲ ಉಪ ಪಂಗಡಗಳನ್ನು ಎಸ್.ಟಿ. ಸಮುದಾಯಕ್ಕೆ ಸೇರಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ** ಎ.ಟಿ. **ರಾಮಸ್ವಾಮಿ,** ಕೆ.ಎಂ. **ಶಿವಲಿಂಗೇಗೌಡ, ಕೆ. ಶ್ರೀನಿವಾಸಗೌಡ, ಕೆ.ಎಸ್. ಲಿಂಗೇಶ್, ಡಾ. ಕೆ. ಅನ್ನದಾನಿ ಹಾಗೂ ಇತರರು** – ಕರ್ನಾಟಕ ರಾಜ್ಯದಲ್ಲಿ ಲಕ್ಷಾಂತರ ಕೋಟಿ ರೂಪಾಯಿಗಳ ಸರ್ಕಾರದ ಸಂಪತ್ತನ್ನು ಲೂಟಿ ಮಾಡುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

5. ಗಮನ ಸೆಳೆಯುವ ಸೂಚನೆಗಳು

1) **ಡಾ. ಜಿ. ಪರಮೇಶ್ವರ್ ಅವರು** – ರಾಜ್ಯದ ವಿವಿಧ ಸಮುದಾಯಗಳ ಅಭಿವೃದ್ಧಿಗಾಗಿ ಸ್ಥಾಪಿಸಲಾಗಿರುವ ನಿಗಮಗಳಲ್ಲಿ ವಿಶೇಷವಾಗಿ ಮೀಸಲು ಕ್ಷೇತ್ರಗಳ ಜನರ ಅಭಿವೃದ್ಧಿಗಾಗಿ ಹೆಚ್ಚಿನ ಅನುದಾನವನ್ನು ಮತ್ತು ಗುರಿಯ ಪ್ರಮಾಣವನ್ನು ಹೆಚ್ಚಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

2) **ಶ್ರೀಮತಿ ರೂಪಕಲಾ** ಎಂ. **ಅವರು** – ಕೆ.ಜಿ.ಎಫ್. ನಗರಸಭೆ ವ್ಯಾಪ್ತಿಯಲ್ಲಿನ ಘೋಷಿತ ಕೊಳಚೆ ಪ್ರದೇಶಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಮಾನ್ಯ ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

... 3/ ..

3) **ಶ್ರೀ ಎಂ. ಕೃಷ್ಣಾರೆಡ್ಡಿ ಅವರು –** ಚಿಂತಾಮಣಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಆಲಂಬಗಿರಿ ಗ್ರಾಮದ ರೈತರ ಜಮೀನುಗಳಿಗೆ ಖಾತೆ ಮತ್ತು ಮ್ಯುಟೇಷನ್‌ಗಳ ಆಧಾರದಲ್ಲಿ ಗಣಕೀಕೃತ ಪಹಣಿಯಲ್ಲಿ ರೈತರ ಹೆಸರನ್ನು ನಮೂದಿಸಿ ಖಾತೆ ಮಾಡಿಕೊಡುವ ಬಗ್ಗೆ ಹಾಗೂ ವಿಳಂಬಕ್ಕೆ ಕಾರಣವಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

4) **ಶ್ರೀ ನೆಹರು ಓಲೇಕಾರ್ ಅವರು –** ಸಾರಿಗೆ ಇಲಾಖೆಯಲ್ಲಿ ಮೋಟಾರು ವಾಹನ ನಿರೀಕ್ಷಕರ ಹುದ್ದೆಗಳ ಅಭ್ಯರ್ಥಿಗಳ ತಾತ್ಕಾಲಿಕ ಪಟ್ಟಿಯನ್ನು ಪ್ರಕಟಿಸಿ ಎರಡು ವರ್ಷಗಳು ಕಳೆದಿದ್ದರೂ ಸಹ ನೇಮಕಾತಿ ಆದೇಶವನ್ನು ನೀಡದಿರುವ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

5) **ಶ್ರೀ ಎಂ. ಶ್ರೀನಿವಾಸ್ ಅವರು –** ಮಂಡ್ಯದ ತಹಶೀಲ್ದಾರ್‌ರವರು ದಾಳಿ ನಡೆಸಿ ವಶಪಡಿಸಿಕೊಂಡಿದ್ದ ಅಕ್ರಮ ಅಕ್ಕಿ ಚೀಲಗಳು ನಾಪತ್ತೆಯಾಗಿರುವ ಪ್ರಕರಣವನ್ನು ಪೊಲೀಸರು ಮುಚ್ಚಿಹಾಕಲು ಪ್ರಯತ್ನಿಸುತ್ತಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

6) **ಶ್ರೀ ಟಿ. ರಘುಮೂರ್ತಿ ಅವರು –** ಚಳ್ಳಕೆರೆ ಕ್ಷೇತ್ರಕ್ಕೆ ಬಗರ್ ಹುಕುಂ ಸಮಿತಿಯನ್ನು ಸ್ಥಾಪಿಸಲು ಕ್ರಮವಹಿಸದವರ ಬಗ್ಗೆ ಹಾಗೂ ಈ ವಿಳಂಬದಿಂದ ಅರ್ಹ ಫಲಾನುಭವಿಗಳಿಗೆ ಆಗಿರುವ ತೊಂದರೆಯ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

7) **ಶ್ರೀ ಹೆಚ್.ಪಿ. ಮಂಜುನಾಥ್ ಅವರು –** ಖಾಸಗಿ ಶಾಲಾ ಕಟ್ಟಡದ ಸುರಕ್ಷತೆ ಮತ್ತು ಅಗ್ನಿ ನಂದಕ ಯಂತ್ರದ ಧೃಡೀಕರಣ ಪ್ರಮಾಣ ಪತ್ರಗಳನ್ನು ಪ್ರತಿ ವರ್ಷ ಪಡೆಯಲು ಹಾಗೂ ಖಾಸಗಿ ಶಾಲೆಗಳ ಮಾನ್ಯತೆಯನ್ನು ನವೀಕರಿಸಲು ಆಗುತ್ತಿರುವ ವಿಳಂಬದ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

8) **ಶ್ರೀ ಕೆ.ಎಸ್. ಲಿಂಗೇಶ್ ಅವರು –** ಬೇಲೂರು ಜಿಲ್ಲೆಯಲ್ಲಿ ಗೋಶಾಲೆ ಇಲ್ಲದಿರುವುದರಿಂದ ಹೈಬ್ರಿಡ್ ಗಂಡು ಕರುಗಳನ್ನು ಹಾದಿ ಬೀದಿಯಲ್ಲಿ ಬಿಟ್ಟು ಹೋಗುತ್ತಿದ್ದು, ಅವುಗಳು ಆಹಾರ ಇಲ್ಲದೆ ಸಾಯುತ್ತಿರುವುದರಿಂದ ಗೋಶಾಲೆಯನ್ನು ತೆರೆಯುವ ಬಗ್ಗೆ ಮಾನ್ಯ ಪಶುಸಂಗೋಪನೆ ಸಚಿವರ ಗಮನ ಸೆಳೆಯುವುದು.

9) **ಶ್ರೀ ಡಿ.ಎಸ್. ಹೂಲಗೇರಿ ಮತ್ತು ಶ್ರೀ ಬಸನಗೌಡ ದದ್ದಲ್ ಅವರುಗಳು –** 2021-22ನೇ ಸಾಲಿನಲ್ಲಿ ಪ್ರಗತಿ ಕಾಲೋನಿ ಯೋಜನೆಯಡಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಕಾಲೋನಿಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲು ಹಂಚಿಕೆಯಾಗಿರುವ ಅನುದಾನವನ್ನು ಹಿಂಪಡೆದಿರುವ ಬಗ್ಗೆ ಹಾಗೂ ಹಿಂಪಡೆದಿರುವ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

... 4/ ..

10) **ಶ್ರೀ ಕೆ.ಆರ್. ರಮೇಶ್ ಕುಮಾರ್, ಶ್ರೀ ಕೃಷ್ಣ ಬೈರೇಗೌಡ, ಶ್ರೀ ಟಿ. ವೆಂಕಟರಮಣಯ್ಯ ಮತ್ತು ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಮತ್ತು ಇತರರು –** ಕೋಲಾರ, ಚಿಕ್ಕಬಳ್ಳಾಪುರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ಕುಡಿಯುವ ನೀರು ಸರಬರಾಜು ಮಾಡುವ ಎತ್ತಿನಹೊಳೆ ಯೋಜನೆಯ ಅನುಷ್ಠಾನದ ನಿರ್ಲಕ್ಷ್ಯ ಹಾಗೂ ವಿಳಂಬದ ಬಗ್ಗೆ ಹಾಗೂ ಯೋಜನೆಯ ಅವಶ್ಯಕ ಅಂಶಗಳಾದ ಜಲಾಶಯ ನಿರ್ಮಾಣ ಹಾಗೂ ಇತರೆ ಕಾಮಗಾರಿಗಳು ಸಂಪೂರ್ಣವಾಗಿ ಸ್ಥಗಿತವಾಗಿರುವುದರಿಂದ ಸ್ವಚ್ಛ ಕುಡಿಯುವ ನೀರು ಮರೀಚಿಕೆಯಾಗಿದ್ದು, ಆ ಭಾಗದ ಜನರುಗಳಿಗೆ ಅನ್ಯಾಯವಾಗಿರುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

11) **ಶ್ರೀ ಅನಿಲ್ ಚಿಕ್ಕಮಾದು ಅವರು –** ಹಳೆ ಮೈಸೂರು ಪ್ರಾಂತ್ಯದಲ್ಲಿ ನಾಯಕ ಸಮಾಜದವರಿಗೆ ಜಾತಿ ಪ್ರಮಾಣ ಪತ್ರ, ಸಿಂಧುತ್ವ ಪ್ರಮಾಣ ಪತ್ರ ನೀಡುವ ಸಂದರ್ಭದಲ್ಲಿ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದಿಂದ ಅನಗತ್ಯ ವಿಚಾರಣೆ ನೆಪದಲ್ಲಿ ಉಂಟಾಗಿರುವ ಕಿರುಕುಳ ಹಾಗೂ ಗೊಂದಲಗಳ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

12) **ಡಾ. ದೇವಾನಂದ್ ಫುಲಸಿಂಗ್ ಚವ್ಹಾಣ್ ಅವರು –** ಕಳೆದ ಕೆಲವು ದಶಕಗಳಿಂದ ಪ್ರತಿ ವರ್ಷ ಸಂಭವಿಸುತ್ತಿರುವ ಪ್ರಕೃತಿ ವಿಕೋಪದಿಂದಾಗಿ ವಿಜಯಪುರ ಜಿಲ್ಲೆಯ ಜನರು ಅನುಭವಿಸುತ್ತಿರುವ ಸಮಸ್ಯೆಗಳ ಬಗ್ಗೆ ಹಾಗೂ ಈ ಕುರಿತಂತೆ ಶಾಶ್ವತ ಪರಿಹಾರ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

13) **ಶ್ರೀ ಶ್ರೀಮಂತ ಬಾಳಸಾಹೇಬ್ ಪಾಟೀಲ್ ಅವರು –** ಬೆಳಗಾವಿ ಜಿಲ್ಲೆಯ ಕಾಗವಾಡ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ತೋಟಪಟ್ಟಿ ಗ್ರಾಮಗಳಲ್ಲಿ ವಾಸ ಮಾಡುತ್ತಿರುವ ಜನರ ಮನೆಗಳಿಗೆ 24X7 ನಿರಂತರ ಜ್ಯೋತಿ ವಿದ್ಯುತ್ ಯೋಜನೆಯಡಿಯಲ್ಲಿ ವಿದ್ಯುತ್ ಸಂಪರ್ಕವನ್ನು ಕಲ್ಪಿಸುವ ಬಗ್ಗೆ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

6. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ರವೀಂದ್ರ ಶ್ರೀಕಂಠಯ್ಯ ಇವರು – ಶ್ರೀರಂಗಪಟ್ಟಣ ಕ್ಷೇತ್ರ ವ್ಯಾಪ್ತಿಯಲ್ಲಿ ಜಮೀನುಗಳ ಸರ್ವೇ, ಪೋಡಿ, ನಕಾಶೆಗಳು ದೊರಕದೇ ಸಂಕಷ್ಟಕ್ಕೆ ಒಳಗಾಗಿರುವ ರೈತರುಗಳಿಗೆ ಅನುಕೂಲ ಮಾಡಿಕೊಡುವ ಬಗ್ಗೆ ದಿನಾಂಕ:13.12.2021ರ ಗಮನ ಸೆಳೆಯುವ ಸೂಚನೆಗೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm